# ಕರ್ನಾಟಕ ಲೋಕಾಯುಕ್ತ

ಸಂಖ್ಯೆ:ಕಲೋ/ಆಡಳಿತ-1/119/2016-17 ದಿನಾಂಕ:30/11/2022.

## ಸುತ್ತೋಲೆ

ವಿಷಯ: ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಪೊಲೀಸ್ ವಿಭಾಗವು ನಿರ್ವಹಿಸಬೇಕಾದ ಕರ್ತವ್ಯಗಳ ಬಗ್ಗೆ ಕ್ರೋಢೀಕೃತ ನಿರ್ದೇಶನಗಳನ್ನು ತಿದ್ದುಪಡಿ ಮಾಡಿರುವ ಬಗ್ಗೆ.

ಉಲ್ಲೇಖ: ಈ ಕಛೇರಿ ಸಮಸಂಖ್ಯೆಯ ಸುತ್ತೋಲೆ ದಿನಾಂಕ 16/05/2022.

- - - -

ಗೌರವಾನ್ವಿತ ಲೋಕಾಯುಕ್ತರವರ ನಿರ್ದೇಶನದಂತೆ ಉಲ್ಲೇಖಿತ ಸುತ್ತೋಲೆಯಲ್ಲಿನ ಕ್ರಮ ಸಂಖ್ಯೆ 5ರ ಸೂಚನೆಯನ್ನು ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ.

"ತನಿಖೆ ಪೂರ್ಣಗೊಂಡಿರುವ ಕ್ರಿಮಿನಲ್ ಪ್ರಕರಣಗಳಲ್ಲಿ ಅಭಿಯೋಜನಾ ಮಂಜೂರಾತಿ ಆದೇಶ ಸ್ವೀಕರಿಸಿ, ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ ನಂತರ, ದೋಷಾರೋಪಣ ಪಟ್ಟಿಯನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ದೃಢೀಕರಿಸಿ, ಆರೋಪಿತರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮುಂದಿನ ಕ್ರಮಕ್ಕಾಗಿ ನಿಬಂಧಕರಿಗೆ ಕಳುಹಿಸಿಕೊಡತಕ್ಕದ್ದು. ದೋಷಾರೋಪಣ ಪತ್ರದ ಪ್ರತಿಯನ್ನು ಕಳುಹಿಸಿಕೊಡಲು ವಿಳಂಭವಾದಲ್ಲಿ ಆರೋಪಿತ ಅಧಿಕಾರಿ/ನೌಕರರು ನಿವೃತ್ತಿಯಾಗುವ ಸಾಧ್ಯತೆಗಳಿರುವುದರಿಂದ ಮೇಲ್ಕಂಡಂತೆ ಅಭಿಯೋಜನಾ ಮಂಜೂರಾತಿ ಆದೇಶ ಸ್ವೀಕರಿಸಿ ದೋಷಾರೋಪಣ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿಧ ನಂತರ ಯಾವುದೇ ವಿಳಂಬವಿಲ್ಲದೇ ದೋಷಾರೋಪಣ ಪಟ್ಟಿಯ ಪ್ರತಿಯನ್ನು ಕಳುಹಿಸಿಕೊಡತಕ್ಕದ್ದು, ಒಂದು ವೇಳೆ ಸಕಾರಣಗಳಿಲ್ಲದೇ ದೋಷಾರೋಪಣ ಪಟ್ಟಿಯ ಪ್ರತಿಯನ್ನು ಒದಗಿಸಲು ವಿಳಂಬವಾಗಿದ್ದಲ್ಲಿ ಯಾವ ಕಾರಣಕ್ಕೆ ವಿಳಂಬವಾಗಿದೆ ಹಾಗೂ ಯಾರಿಂದ ವಿಳಂಬವಾಗಿದೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು".

5/12

ನಿಬಂಧಕರು
ಕರ್ನಾಟಕ ಲೋಕಾಯುಕ್ತ,
ಬೆಂಗಳೂರು.

ದಿ. 30/11/22

ಗೆ:

1) ಕಾರ್ಯದರ್ಶಿಗಳು, ಗೌರವಾನ್ವಿತ ಲೋಕಾಯುಕ್ತರು, ಕಲೋ, ಬೆಂಗಳೂರು.
2) ಪತ್ರಾಂಕಿತ ಸಹಾಯಕರು, ಗೌರವಾನ್ವಿತ ಉಪಲೋಕಾಯುಕ್ತರು-1 ಮತ್ತು 2, ಕಲೋ, ಬೆಂಗಳೂರು.
3) ಅಪರ ಪೊಲೀಸ್ ಮಹಾನಿರ್ದೇಶಕರು, ಕಲೋ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳಿಗೆ ಈ ಸುತ್ತೋಲೆಯನ್ನು ತನ್ನ ಎಲ್ಲಾ ಅಧೀನ ಅಧಿಕಾರಿಗಳಿಗೆ ಕಳುಹಿಸಿಕೊಡಬೇಕೆಂಬ ಕೋರಿಕೆಯೊಂದಿಗೆ.
5) ಎಲ್ಲಾ ಜಿಲ್ಲಾ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಇವರಿಗೆ ಈ ಸುತ್ತೋಲೆಯನ್ನು ತನ್ನ ಎಲ್ಲಾ ಅಧೀನ ಅಧಿಕಾರಿಗಳಿಗೆ ಕಳುಹಿಸಿಕೊಡಬೇಕೆಂಬ ಕೋರಿಕೆಯೊಂದಿಗೆ.
6) ಎಲ್ಲಾ ಜಿಲ್ಲಾ ಪೊಲೀಸ್ ಅಧೀಕ್ಷಕರು.
7) ಎಲ್ಲಾ ಜಿಲ್ಲಾ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು.
8) ಎಲ್ಲಾ ಪೊಲೀಸ್ ಉಪಾಧೀಕ್ಷಕರು, ಕರ್ನಾಟಕ ಲೋಕಾಯುಕ್ತ.

ಮಾಹಿತಿಗಾಗಿ:

1) ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
2) ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಪ್ರಧಾನ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
3) ಪೊಲೀಸ್ ಮಹಾನಿರ್ದೇಶಕರು ಮತ್ತು ಮಹಾನಿರೀಕ್ಷಕರು, ಬೆಂಗಳೂರು.
4) ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು.
5) ಉಪನಿರ್ದೇಶಕರು, ಸಾಂಖ್ಯಿಕ ಶಾಖೆ, ಕಲೋ, ಬೆಂಗಳೂರು. ಇಲಾಖಾ ವೆಬ್‌ಸೆಟ್ ಅಲ್ಲಿ ಅಪ್‌ಲೋಡ್ ಮಾಡಲು ಕಳುಹಿಸಲಾಗಿದೆ.

PK
7/12/2022